**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ರವಿ ಇವರು ನಿಯಮ 72 ರಡಿ ಮಂಡಿಸಿರುವ ಸೂಚನೆಗೆ ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರ ಉತ್ತರ.**

**ವಿಷಯ: ಯಶವಂತಪುರ ಎಪಿಎಂಸಿ ಮಾರುಕಟ್ಟೆಯ ಒತ್ತಡವನ್ನು ಕಡಿಮೆ ಮಾಡಿ, ಈ ಮಾರುಕಟ್ಟೆಗೆ ದಿನನಿತ್ಯ ಸರಕು ಸಾಗಣೆ ಮಾಡಲು ಬರುವ ವಾಹನಗಳ ದಟ್ಟಣೆಯಿಂದ (ಸುಮಾರು 2000 ವಾಹನಗಳು) ಮತ್ತು ಗ್ರಾಹಕರ ವಾಹನಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ಕಿರಿಕಿರಿಯನ್ನು ತಪ್ಪಿಸಲು ಹಾಗೂ ರೈತರು ಮತ್ತು ವರ್ತಕರಿಗೆ ಅನುಕೂಲವಾಗುವಂತೆ ಬೆಂಗಳೂರು ಹೊರ ವಲಯದಲ್ಲಿ ಸುಮಾರು 88 ಎಕರೆ ವಿಸ್ತೀರ್ಣದಲ್ಲಿ 400 ರಿಂದ 500 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗಿರುವ ದಾಸನಪುರ ಮಾರುಕಟ್ಟೆಯಲ್ಲಿ ಬೆಳ್ಳುಳ್ಳಿ, ಈರುಳ್ಳಿ, ಆಲೂಗಡ್ಡೆ, ಶುಂಠಿ ವ್ಯಾಪಾರ ನಡೆಸಲು ಅನುಮತಿ ನೀಡಲಾಗಿದ್ದರೂ ಸಹ ಯಶವಂತಪುರ ಮಾರುಕಟ್ಟೆಯಿಂದ ಬೆಳ್ಳುಳ್ಳಿ, ಈರುಳ್ಳಿ, ಆಲೂಗಡ್ಡೆ, ಶುಂಠಿ ವ್ಯಾಪಾರವನ್ನು ಪೂರ್ಣ ಪ್ರಮಾಣದಲ್ಲಿ ದಾಸನಪುರಕ್ಕೆ ಸ್ಥಳಾಂತರ ಮಾಡದಿರುವುದರಿಂದ ಸಾರ್ವಜನಿಕರು ಮತ್ತು ವರ್ತಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ.**

******

ಬೆಂಗಳೂರು ನಗರ ಕ್ಷಿಪ್ರವಾಗಿ ಬೆಳೆದಿದ್ದು, ವಾಹನ ದಟ್ಟಣೆ ನಿಯಂತ್ರಣ ಹಾಗೂ ರೈತರ ಅನುಕೂಲಕ್ಕಾಗಿ ನಗರದ ಹೊರ ವಲಯದ ದಾಸನಪುರದಲ್ಲಿ 67.25 ಎಕರೆ ಪ್ರದೇಶವನ್ನು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 6(2) ರಡಿ ಉಪ ಮಾರುಕಟ್ಟೆ ಹಾಗೂ ಉಪ ಮಾರುಕಟ್ಟೆ ಪ್ರಾಂಗಣವೆಂದು ಘೋಷಿಸಿ ರೂ.306.50 ಕೋಟಿಗಳ ಮೊತ್ತದಲ್ಲಿ ಹಂತ ಹಂತವಾಗಿ ಮೂಲಭೂತ ಸೌಕರ್ಯಗಳೊಂದಿಗೆ ಅಭಿವೃದ್ಧಿಪಡಿಸಲಾಗಿದೆ.

ಬೆಂಗಳೂರು ಯಶವಂತಪುರ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಈಗಾಗಲೇ ಅಂಗಡಿ, ಮಳಿಗೆಗಳನ್ನು ಹೊಂದಿ ಈರುಳ್ಳಿ, ಆಲೂಗಡ್ಡೆ, ಬೆಳ್ಳುಳ್ಳಿ, ಶುಂಠಿ ಉತ್ಪನ್ನಗಳ ವ್ಯಾಪಾರ ವಹಿವಾಟು ನಡೆಸುತ್ತಿರುವ ಪೇಟೆ ಕಾರ್ಯಕರ್ತರುಗಳಿಗೆ ದಾಸನಪುರ ಉಪ ಮಾರುಕಟ್ಟೆಯಲ್ಲಿ ಲಭ್ಯವಿರುವ ಅಂಗಡಿ ವ ಮಳಿಗೆಗಳನ್ನು ಹಂಚಿಕೆ ಮಾಡಲು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ಮಾರುಕಟ್ಟೆ ಪ್ರಾಂಗಣದಲ್ಲಿ ಸ್ವತ್ತಿನ ಹಂಚಿಕೆ ನಿಯಂತ್ರಣ) (ತಿದ್ದುಪಡಿ) ನಿಯಮಗಳು 2022ರ ನಿಯಮ 7(4)ರ ಅವಕಾಶದನ್ವಯ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ಮಾರುಕಟ್ಟೆ ಪ್ರಾಂಗಣದಲ್ಲಿ ಸ್ವತ್ತಿನ ಹಂಚಿಕೆ ನಿಯಂತ್ರಣ) ನಿಯಮಗಳು 2004ರ ನಿಯಮ 7(2) ರಲ್ಲಿರುವ ಷರತ್ತಿಗೆ ವಿನಾಯಿತಿ ನೀಡಿ, ಯಶವಂತಪುರ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿನ ಈರುಳ್ಳಿ, ಆಲೂಗಡ್ಡೆ, ಬೆಳ್ಳುಳ್ಳಿ, ಶುಂಠಿ ವ್ಯಾಪಾರ ವಹಿವಾಟನ್ನು ದಾಸನಪುರ ಉಪ ಮಾರುಕಟ್ಟೆ ಪ್ರಾಂಗಣಕ್ಕೆ ಸಂಪೂರ್ಣವಾಗಿ ಸ್ಥಳಾಂತರಿಸಲು ದಿನಾಂಕ:17/01/2023 ರಂದು ಆದೇಶಿಸಲಾಗಿದೆ.

ಯಶವಂತಪುರ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಈರುಳ್ಳಿ, ಆಲೂಗಡ್ಡೆ, ಬೆಳ್ಳುಳ್ಳಿ, ಶುಂಠಿ ಉತ್ಪನ್ನಗಳನ್ನು ಮಾರಾಟ ನಿಯಂತ್ರಣ ಕಕ್ಷೆಯಿಂದ ಅಪವರ್ಜಿಸಿ ದಾಸನಪುರ ಉಪ ಮಾರುಕಟ್ಟೆ ಪ್ರಾಂಗಣದಲ್ಲಿ ಈರುಳ್ಳಿ, ಆಲೂಗಡ್ಡೆ, ಬೆಳ್ಳುಳ್ಳಿ, ಶುಂಠಿ ಉತ್ಪನ್ನಗಳನ್ನು ಮಾತ್ರ ಮಾರಾಟ ನಿಯಂತ್ರಣ ಕಕ್ಷೆಗೆ ಒಳಪಡಿಸುವ ಕುರಿತು ದಿನಾಂಕ:21.01.2023 ರಂದು ಆಕ್ಷೇಪಣೆಗಳನ್ನು ಅಧಿಸೂಚನೆ ಮೂಲಕ

...2

SL No 30
05/07/2023



ಆಹ್ವಾನಿಸಲಾಗಿರುತ್ತದೆ. ಅಲ್ಲದೇ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ವತಿಯಿಂದ ಯಶವಂತಪುರ ಪೇಟೆ ಕಾರ್ಯಕರ್ತರಿಗೆ ದಾಸನಪುರ ಪ್ರಾಂಗಣದಲ್ಲಿ ವಹಿವಾಟು ನಡೆಸಲು ಮಳಿಗೆ ಹಂಚಿಕೆ ಮಾಡಲು ದಿನಾಂಕ:02.02.2023 ರಂದು ಪ್ರಕಟಣೆ ಹೊರಡಿಸಲಾಗಿರುತ್ತದೆ.

ಸದರಿ ಮಳಿಗೆ ಹಂಚಿಕೆ ಪ್ರಕಟಣೆಯ ವಿರುದ್ಧ ಕಲವು ವರ್ತಕರು ದಿನಾಂಕ:21/01/2023 ರಂದು ಹೊರಡಿಸಲಾದ ಪ್ರಾಥಮಿಕ ಅಧಿಸೂಚನೆಗೆ ಆಕ್ಷೇಪಣೆಗಳನ್ನು ಸಲ್ಲಿಸಲು ನೀಡಿರುವ ಕಾಲಾವಕಾಶದ ಅವಧಿಯಲ್ಲಿಯೇ ಮಳಿಗೆ ಹಂಚಿಕೆ ಪ್ರಕಟಣೆ ಹೊರಡಿಸಿರುವುದಕ್ಕೆ ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂ:3221/2023 ಹಾಗೂ ರಿಟ್ ಅರ್ಜಿ ಸಂ:4123/2023 ನ್ನು ದಾಖಲಿಸಿರುತ್ತಾರೆ. ಮಾನ್ಯ ಉಚ್ಛ ನ್ಯಾಯಾಲಯವು ದಿನಾಂಕ:09/02/2023 ರಂದು ಹಂಚಿಕೆ ಪ್ರಕಟಣೆಗೆ ತಡೆಯಾಜ್ಞೆ ನೀಡಿದ್ದರಿಂದ, ದಿನಾಂಕ:28/02/2023 ರಂದು ಸದರಿ ಹಂಚಿಕೆ ಪ್ರಕಟಣೆಯನ್ನು ರದ್ದುಪಡಿಸಲಾಗಿರುತ್ತದೆ.

ದಿನಾಂಕ:27/02/2023 ರಂದು ಯಶವಂತಪುರ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಈರುಳ್ಳಿ, ಆಲೂಗಡ್ಡೆ, ಬೆಳ್ಳುಳ್ಳಿ, ಶುಂಠಿ ಉತ್ಪನ್ನಗಳನ್ನು ಅಪವರ್ಜಿಸಿ ದಾಸನಪುರ ಉಪ ಮಾರುಕಟ್ಟೆ ಪ್ರಾಂಗಣದಲ್ಲಿ ಈರುಳ್ಳಿ, ಆಲೂಗಡ್ಡೆ, ಬೆಳ್ಳುಳ್ಳಿ, ಶುಂಠಿ ಉತ್ಪನ್ನಗಳನ್ನು ಮಾತ್ರ ಮಾರಾಟ ನಿಯಂತ್ರಣ ಕಕ್ಷೆಗೆ ಒಳಪಡಿಸಿ ಅಂತಿಮ ಅಧಿಸೂಚನೆಯನ್ನು ಹೊರಡಿಸಿದ್ದು, ಇದರ ವಿರುದ್ಧ ವಿವಿಧ ವರ್ತಕರುಗಳು ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂ:5452/2023, 5455/2023, 4132/2023, 4124/2023, 5077/2023, 4123/2023 ಪ್ರಕರಣಗಳನ್ನು ದಾಖಲಿಸಿದ್ದು, ಸದರಿ ಪ್ರಕರಣಗಳು ಅಂತಿಮ ವಿಚಾರಣೆಗೆ ಬಾಕಿ ಇದ್ದು, ಮಾನ್ಯ ನ್ಯಾಯಾಲಯದ ಆದೇಶದಂತೆ ಕ್ರಮ ಕೈಗೊಳ್ಳಲಾಗುವುದು.

(ಸಂಖ್ಯೆ: ಸಿಒ 118 ಎಂಆರ್‌ಇ 2023)

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು